# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 170(1316)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ಬೆಂಗಳೂರು ನಗರ ಜಿಲ್ಲಾ ಆಸ್ಪತ್ರೆಗಳಲ್ಲಿನ ವಿವಿಧ ಸೌಲಭ್ಯಗಳ ಕೊರತೆಯ ಬಗ್ಗೆ

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಚಿಕಿತ್ಸಾ ಕೇಂದ್ರಗಳಿವೆ ಹಾಗೂ ಈ ಚಿಕಿತ್ಸಾ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳಾವುವು; (ಮಾಹಿತಿ ನೀಡುವುದು)

(ಆ) ಬೆಂಗಳೂರು ನಗರ ಜಿಲ್ಲೆಯಲ್ಲಿನ ಜಿಲ್ಲಾ ಆಸ್ಪತ್ರೆಗಳಲ್ಲಿ ಎಕ್ಸ್-ರೇ, ಸಿಟಿ ಸ್ಕ್ಯಾನಿಂಗ್ ಮತ್ತು ಎಂ.ಆರ್.ಐ ಸ್ಕ್ಯಾನಿಂಗ್ ಸೌಲಭ್ಯ ಇದ್ದರೂ ರೋಗಿಗಳನ್ನು ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಕಳಿಸುತ್ತಿದ್ದು ಇದರಿಂದ ರೋಗಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಆಸ್ಪತ್ರೆಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಅರ್ಧದಷ್ಟು ಔಷಧಿಗಳು ಲಭ್ಯವಿಲ್ಲದ ಕಾರಣ ರೋಗಿಗಳು ಖಾಸಗಿ ಔಷಧ ಮಳಿಗೆಗಳಿಗೆ ಹೋಗುತ್ತಿರುವ ಬಗ್ಗೆ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು; ಸರ್ಕಾರವೇನಾದರೂ ಖಾಸಗಿ ಔಷಧಿ ಮಳಿಗೆಗಳಿಗೆ ಲಾಭ ಮಾಡಿಕೊಡುವ ಉದ್ದೇಶವೇನಾದರೂ ಹೊಂದಿದೆಯೇ? (ಸಂಪೂರ್ಣ ವಿವರ ನೀಡುವುದು)